# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ.ನಾಗರಾಜು ರವರು ಶೂನ್ಯ ವೇಳೆಯ ಮಾಲೂರು ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಚಿಕಿತ್ಸೆ ವ್ಯವಸ್ಥೆಯಲ್ಲಿನ ಸಮಸ್ಯೆಯ ಬಗ್ಗೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ: -

ಮಾಲೂರು ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ 02 ಡಯಾಲಿಸಿಸ್ ಯಂತ್ರಗಳನ್ನು, PPP ಮಾದರಿಯಲ್ಲಿ ನೀಡಲಾಗಿದ್ದು, 01 ಡಯಾಲಿಸಿಸ್ ಯಂತ್ರವನ್ನು ಮರಿಕಾಂಬ ಟ್ರಸ್ಟ್ ವತಿಯಿಂದ ನೀಡಲಾಗಿರುತ್ತದೆ. ಒಟ್ಟು 03 ಡಯಾಲಿಸಿಸ್ ಯಂತ್ರಗಳಲ್ಲಿ 02 ಡಯಾಲಿಸಿಸ್ ಯಂತ್ರಗಳು ಕಾರ್ಯನಿರ್ವಹಿಸುತ್ತಿದ್ದು, 01 ಡಯಾಲಿಸಿಸ್ ಯಂತ್ರವು ದುರಸ್ತಿಯಲ್ಲಿದೆ.

ಪ್ರಧಾನ ಮಂತ್ರಿ ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದ ಮಾರ್ಗಸೂಚಿಯ ಪ್ರಕಾರ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಡಯಾಲಿಸಿಸ್ ಯಂತ್ರಗಳು ಹಾಗೂ ಪ್ರತಿ ತಾಲ್ಲೂಕು ಅಸ್ಪತ್ರೆಯಲ್ಲಿ 02 ಡಯಾಲಿಸಿಸ್ ಯಂತ್ರಗಳನ್ನು ಅಳವಡಿಸಲು ಅವಕಾಶವಿರುತ್ತದೆ. ಈಗಿರುವ 02 ಡಯಾಲಿಸಿಸ್ ಯಂತ್ರಗಳಲ್ಲಿ 19 ರೋಗಿಗಳಿಗೆ ಡಯಾಲಿಸಿಸ್ ಸೇವೆಗಳನ್ನು ನೀಡಲಾಗುತ್ತಿದೆ. 01 ಡಯಾಲಿಸಿಸ್ ಯಂತ್ರವನ್ನು ದುರಸ್ತಿಗೊಳಿಸಿ, ಕಾಯ್ದಿರಿಸಿರುವ ರೋಗಿಗಳಿಗೆ ಡಯಾಲಿಸಿಸ್ ಸೇವೆಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: ಆಕುಕ 54 ಎಸ್.ಟಿ.ಕ್ಯೂ 2023**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು